ಅಕಾಡೆಮಿಯನ್ನು ಧಾರವಾಡದಲ್ಲಿ 90 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ. ಜ್ಞಾನಸಂಗಮ- ಸ್ಮಾರ್ಟ್ ಕೀ (ಕರ್ನಾಟಕ ಶಿಕ್ಷಣ ಮಾನದಂಡ) ಯೋಜನೆಯಡಿ 135 ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಐ.ಸಿ.ಟಿ. ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ.

ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದ ಹಾಗೂ ವಾರ್ಷಿಕ ವರಮಾನ 2.50 ಲಕ್ಷ ರೂ.ಗಳಿಗಿಂತ ಕಡಿಮೆ ಇರುವ ಬಡ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗ ಪ್ರೋತ್ಸಾಹಿಸಲು ರಾಜೀವ್ ಗಾಂಧಿ ಸಾಲರೂಪದ ಶಿಷ್ಯ ವೇತನವನ್ನು ಜಾರಿಗೆ ತಂದಿದೆ.

ಉನ್ನತ ಶಿಕ್ಷಣದಲ್ಲಿ ವಿದ್ಯಾರ್ಥಿನಿಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಸಲುವಾಗಿ ಎಲ್ಲಾ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಬೋಧನಾ ಹಾಗೂ ಪ್ರಯೋಗಾಲಯ ಶುಲ್ಕಕ್ಕೆ ವಿನಾಯಿತಿ ನೀಡಿದೆ. 1.19 ಲಕ್ಷ ವಿದ್ಯಾರ್ಥಿನಿಯರು ಈ ಯೋಜನೆಯ ಪ್ರಯೋಜನ ಪಡೆದಿರುತ್ತಾರೆ.

ಎಂ. ಎಂ. ಕಲಬುರ್ಗಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲಾಗಿದೆ. ಯು.ಆರ್. ಅನಂತಮೂರ್ತಿ ಅಧ್ಯಯನ ಪೀಠವನ್ನು ಮೈಸೂರು ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಾಗಿದೆ. ಪಾಲಿ ಭಾಷೆಯ ಸಂಸ್ಥೆಯನ್ನು ಕಲಬುರ್ಗಿಯಲ್ಲಿ ಸ್ಥಾಪಿಸಲಾಗಿದೆ ಹಾಗೂ ವಿದ್ಯಾರ್ಥಿ ನಿಲಯ ಕಟ್ಟಡಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಯನ್ನು ರಾಜ್ಯದಾದ್ಯಂತ ವಿಸ್ತರಿಸಲಾಗಿದ್ದು, ಶರಣೆ ಅಕ್ಕ ಮಹಾದೇವಿಯ ಹೆಸರನ್ನು ವಿಶ್ವವಿದ್ಯಾಲಯಕ್ಕೆ ಇಡಲಾಗಿದೆ.

ರೂಸಾ ಯೋಜನೆಯಡಿ ಒಟ್ಟು 510 ಕೋಟಿ ರೂ.ಗಳ ಅನುದಾನದ ಯೋಜನೆಯಿಂದ 9 ವಿಶ್ವವಿದ್ಯಾಲಯಗಳು, 89 ಪ್ರಥಮ ದರ್ಜೆ ಕಾಲೇಜುಗಳು ಪ್ರಯೋಜನವನ್ನು ಪಡೆದಿವೆ. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಏಕರೂಪ ಶೈಕ್ಷಣಿಕ ವೇಳಾಪಟ್ಟಿ ಅಳವಡಿಕೆ ಹಾಗೂ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆ ಮತ್ತು ಪರೀಕ್ಷಾ ಪ್ರಕಟಣೆಯಲ್ಲಿ ಸಮನ್ವಯ ಆದೇಶ ಹೊರಡಿಸಲಾಗಿದೆ. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣಪತ್ರಗಳ ಗುಣಮಟ್ಟ ರಕ್ಷಣೆ ಮತ್ತು ಮುದ್ರಣದಲ್ಲಿ ಏಕರೂಪತೆಯನ್ನು ಜಾರಿಗೆ ತರಲಾಗಿದೆ.

ಶೈಕ್ಷಣಿಕವಾಗಿ ಹಿಂದುಳಿದಿರುವ ಹೈದ್ರಾಬಾದ್ –ಕರ್ನಾಟಕ ಪ್ರದೇಶದಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉನ್ನತ ಶಿಕ್ಷಣದಲ್ಲಿ ಪಾಲ್ಗೊಳ್ಳುವುದನ್ನು ಉತ್ತೇಜಿಸಲು 73 ಪ್ರಥಮ ದರ್ಜೆ ಕಾಲೇಜುಗಳಲ್ಲಿ ಟೆಲಿ–ಶಿಕ್ಷಣ ಯೋಜನೆಯನ್ನು ಪ್ರಾರಂಭಿಸಲಾಗಿದೆ.

'ನೈಪುಣ್ಯ ನಿಧಿ' ಕಾರ್ಯಕ್ರಮದಡಿ ಉದ್ಯೋಗಾರ್ಹತೆಯನ್ನು ಹೆಚ್ಚಿಸಲು ವಾರ್ಷಿಕವಾಗಿ ಯಾವುದೇ ಸಮುದಾಯಕ್ಕೆ ಸೀಮಿತವಾಗದೆ ಎಲ್ಲಾ ಸಮುದಾಯದ ಒಟ್ಟು 5 ಲಕ್ಷ ವಿದ್ಯಾರ್ಥಿಗಳಿಗೆ ವಿವಿಧ ಆಯಾಮಗಳಲ್ಲಿ ಕೌಶಲ್ಯ ತರಬೇತಿ ನೀಡಲಾಗಿದೆ.

ಸರ್ಕಾರಿ ಮತ್ತು ಅನುದಾನಿತ ವೈದ್ಯಕೀಯ ಎಂಜಿನಿಯರಿಂಗ್ ಮತ್ತು ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರವೇಶ ಪಡೆಯುವ 1.5 ಲಕ್ಷ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಿಸಲಾಗುವುದು.

# ವೈದ್ಯಕೀಯ ಕ್ಷೇತ್ರದಲ್ಲಿ...

ಕೊಡಗು, ಕೊಪ್ಪಳ, ಕಾರವಾರ, ಗದಗ, ಕಲಬುರಗಿ ಮತ್ತು ಚಾಮರಾಜನಗರಗಳಲ್ಲಿ ತಲಾ 150 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ 6 ಹೊಸ ವೈದ್ಯಕೀಯ ಕಾಲೇಜುಗಳು ಕಾರ್ಯಾರಂಭಗೊಂಡಿವೆ. ಇದರಿಂದಾಗಿ 900 ಎಂಬಿಬಿಎಸ್ ಸೀಟುಗಳು ಹೆಚ್ಚುವರಿ ಲಭಿಸಿವೆ. ಇನ್ನೂ 6 ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗುತ್ತಿದೆ. ಜತೆಗೆ 4 ವರ್ಷಗಳ ಅವಧಿಯಲ್ಲಿ ಸರ್ಕಾರಿ ಕೋಟಾದ ಅಡಿಯಲ್ಲಿ ಹೆಚ್ಚುವರಿಯಾಗಿ 1136 ಎಂಬಿಬಿಎಸ್ ಸೀಟುಗಳು ಲಭ್ಯವಾಗಿದ್ದು, ಸರ್ಕಾರಿ ಕೋಟಾದ ಅಡಿಯಲ್ಲಿ ಶೇ.53 ರಷ್ಟು ಪ್ರಮಾಣದಲ್ಲಿ ಸೀಟುಗಳು ಹೆಚ್ಚಳವಾಗಿದೆ.

ರಾಯಚೂರು, ಹಾಸನ, ಕಲಬುರಗಿ, ಬೀದರ್ ಮತ್ತು ಇಲ್ಲಿನ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡಿರುವ ಬೋಧಕ ಆಸ್ಪತ್ರೆಗಳು ಮತ್ತು ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯಲ್ಲಿ ಒಟ್ಟಾರೆಯಾಗಿ 2708 ಹಾಸಿಗೆಗಳನ್ನು ಹೆಚ್ಚುವರಿಯಾಗಿ ಸೇರ್ಪಡೆಗೊಳಿಸಲಾಗಿದೆ.

210 ಹಾಸಿಗೆ ಸಾಮರ್ಥ್ಯವುಳ್ಳ ಟ್ರಾಮಾ ಕೇರ್ ಕೇಂದ್ರ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿ ಶುರುವಾಗಿದೆ. ಕಲಬುರಗಿ ಹಾಗೂ ಮೈಸೂರಿನಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯ ಮೂಲಕ ಹೃದ್ರೋಗ ಚಿಕಿತ್ಸಾ ಘಟಕಗಳು ಹೊಸದಾಗಿ ಕಾರ್ಯಾರಂಭಗೊಂಡಿವೆ.

ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯನ್ನು 120 ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ರಾಜ್ಯ ಮಟ್ಟದ ಸಂಸ್ಥೆಯನ್ನಾಗಿ ಮೇಲ್ದರ್ಜೆಗೇರಿಸಲಾಗುತ್ತಿದ್ದು, ಇದನ್ನು ಪ್ರಸಕ್ತ ಸಾಲಿನಲ್ಲಿ ಕಾರ್ಯಾರಂಭ ಮಾಡಲಾಗುವುದು. ಕಲಬುರಗಿ ಪೆರಿಫೆರಲ್ ಕ್ಯಾನ್ಸರ್ ಕೇರ್ ಕೇಂದ್ರವನ್ನು ಈಗಾಗಲೇ ಹೊಸದಾಗಿ ಆರಂಭಿಸಲಾಗಿದೆ.

ಚಾಮರಾಜನಗರ, ಗದಗ, ಬೀದರ್, ಕಾರವಾರ, ಕಿಮ್ಸ್ ಹುಬ್ಬಳ್ಳಿ ಮತ್ತು ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ 6 ಸರ್ಕಾರಿ ನರ್ಸಿಂಗ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಇದರಿಂದಾಗಿ ಈ ಹಿಂದೆ ಲಭ್ಯವಿದ್ದ 440 ಸೀಟುಗಳಿಗೆ ಹೆಚ್ಚುವರಿಯಾಗಿ 340 ಸರ್ಕಾರಿ ಸೀಟುಗಳು ಸರ್ಕಾರಿ ಕೋಟಾದ ಅಡಿಯಲ್ಲಿ ಲಭ್ಯವಾಗಿರುತ್ತವೆ.

ಕೊಡಗು, ಗದಗ, ಕಾರವಾರ ವೈದ್ಯಕೀಯ ಕಾಲೇಜುಗಳಲ್ಲಿ ಹಾಗೂ 14 ಜಿಲ್ಲಾ ಆಸ್ಪತ್ರೆಗಳಲ್ಲಿ ಅರೆ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದ್ದು, ಇದರಿಂದಾಗಿ 2380 ಸರ್ಕಾರಿ ಸೀಟುಗಳು ಲಭ್ಯವಾಗಿವೆ. ಸರ್ಕಾರಿ ಮತ್ತು ಖಾಸಗಿ ಅರೆ ವೈದ್ಯಕೀಯ ಕಾಲೇಜುಗಳಲ್ಲಿ ಒಟ್ಟಾರೆಯಾಗಿ 3642 ಸರ್ಕಾರಿ ಸೀಟುಗಳು ಲಭ್ಯವಾಗಿರುತ್ತವೆ.

2014–15 ನೇ ಸಾಲಿನಲ್ಲಿ ತುಮಕೂರು, ಚಿತ್ರದುರ್ಗ, ಬಾಗಲಕೋಟೆ, ಹಾವೇರಿ, ಯಾದಗಿರಿ ಮತ್ತು ಚಿಕ್ಕಬಳ್ಳಾಪುರದಲ್ಲಿ 6 ವೈದ್ಯಕೀಯ ಕಾಲೇಜುಗಳ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ.

